ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣ

ಶ್ರೀ ತಿಪ್ಪಣ್ಣ ಕಮಕನೂರ (ನಾಮನಿರ್ದೇಶನ ಹೊಂದಿದವರು):-

355 (364) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಿಭಾಗೀಯ ಕೇಂದ್ರವಾಗಿರುವ ಕಲಬುರಗಿಯಲ್ಲಿ ಅಂತಾರಾಷ್ಟ್ರೀಯ ಮಟ್ಟದ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣ ಮಾಡಬೇಕೆಂಬ ಬೇಡಿಕೆ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕರ್ನಾಟಕ ರಾಜ್ಯ ಕ್ರಿಕೆಟ್ ಮಂಡಳಿ ಈ ನಿಟ್ಟಿನಲ್ಲಿ ತನ್ನ ಒಪ್ಪಿಗೆ ಸೂಚಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಮಾಹಿತಿ ನೀಡುವುದು)

(ಇ) ಹೊಸ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣಕ್ಕಾಗಿ ಜಮೀನು ಗುರುತಿಸಲಾಗಿದೆಯೇ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?